ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ.

ಓದಲಾಗಿದೆ:
(1) ಸ.ಆ. ಸಂಖ್ಯೆ: ಎಫ್‌ಡಿ 23 ಎಸ್‌ಆರ್‌ಪಿ 2011 ದಿನಾಂಕ: 15.06.2011
(2) ಸ.ಆ. ಸಂಖ್ಯೆ: ಎಫ್‌ಡಿ 07 ಎಸ್‌ಆರ್‌ಪಿ 2012 ದಿನಾಂಕ: 21.04.2012
(3) ಸ.ಆ. ಸಂಖ್ಯೆ: ಎಫ್‌ಡಿ 17 ಎಸ್‌ಆರ್‌ಪಿ 2012 ದಿನಾಂಕ: 14.05.2012
(4) ಸ.ಆ. ಸಂಖ್ಯೆ: ಎಫ್‌ಡಿ 25 ಎಸ್‌ಆರ್‌ಪಿ 2012 ದಿನಾಂಕ: 17.10.2012
(5) ಸ.ಆ. ಸಂಖ್ಯೆ: ಎಫ್‌ಡಿ 09 ಎಸ್‌ಆರ್‌ಪಿ 2013 ದಿನಾಂಕ: 08.05.2013
(6) ಸ.ಆ. ಸಂಖ್ಯೆ: ಎಫ್‌ಡಿ 21 ಎಸ್‌ಆರ್‌ಪಿ 2013 ದಿನಾಂಕ: 03.10.2013
(7) ಸ.ಆ. ಸಂಖ್ಯೆ: ಎಫ್‌ಡಿ 05 ಎಸ್‌ಆರ್‌ಪಿ 2014 ದಿನಾಂಕ: 08.04.2014
(8) ಸ.ಆ. ಸಂಖ್ಯೆ: ಎಫ್‌ಡಿ 17 ಎಸ್‌ಆರ್‌ಪಿ 2014 ದಿನಾಂಕ: 26.09.2014
(9) ಸ.ಆ. ಸಂಖ್ಯೆ: ಎಫ್‌ಡಿ 11 ಎಸ್‌ಆರ್‌ಪಿ 2015 ದಿನಾಂಕ: 24.04.2015
(10) ಸ.ಆ. ಸಂಖ್ಯೆ: ಎಫ್‌ಡಿ 18 ಎಸ್‌ಆರ್‌ಪಿ 2015 ದಿನಾಂಕ: 30.09.2015
(11) ಸ.ಆ. ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2016 ದಿನಾಂಕ: 13.04.2016
(12) ಸ.ಆ. ಸಂಖ್ಯೆ: ಎಫ್‌ಡಿ 33 ಎಸ್‌ಆರ್‌ಪಿ 2016 ದಿನಾಂಕ: 21.10.2016
(13) ಸ.ಆ. ಸಂಖ್ಯೆ: ಎಫ್‌ಡಿ 16 ಎಸ್‌ಆರ್‌ಪಿ 2017 ದಿನಾಂಕ: 30.03.2017
(14) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಪತ್ರ ದಿನಾಂಕ:18.09.2017

**ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 39 ಎಸ್‌ಆರ್‌ಪಿ 2017,**
**ಬೆಂಗಳೂರು, ದಿನಾಂಕ 6ನೇ ಅಕ್ಟೋಬರ್ 2017**

ರಾಜ್ಯ ಸರ್ಕಾರಿ ನೌಕರರುಗಳಿಗೆ 2012ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ **1ನೇ ಜುಲೈ 2017** ರಿಂದ ಜಾರಿಗೆ ಬರುವಂತೆ ತುಟ್ಟಿ ಭತ್ಯೆಯ ದರವನ್ನು **ಮೂಲ ವೇತನದ ಶೇಕಡ 43.25 ರಿಂದ ಶೇಕಡ 45.25 ಕ್ಕೆ ಹೆಚ್ಚಿಸಿ** ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಸರ್ಕಾರದ ಮತ್ತು ಜಿಲ್ಲಾ ಪಂಚಾಯತ್‌ಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶ ಅನ್ವಯಿಸುತ್ತದೆ.

3. ತುಟ್ಟಿಭತ್ಯೆಯ ಉದ್ದೇಶಕ್ಕಾಗಿ "ಮೂಲ ವೇತನ" ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ,

(ಅ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ,

(ಆ) 2012ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ,

(ಇ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ.

4. ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

5. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇಕಡ 43.25** ರಿಂದ **ಶೇಕಡ 45.25** ಕ್ಕೆ ಹೆಚ್ಚಿಸಿ ದಿನಾಂಕ **1ನೇ ಜುಲೈ 2017** ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

6. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿದ್ದ ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇಕಡ 43.25** ರಿಂದ **ಶೇಕಡ 45.25** ಕ್ಕೆ ಹೆಚ್ಚಿಸಿ ದಿನಾಂಕ **1ನೇ ಜುಲೈ 2017** ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

7. ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ನೌಕರರಿಗೆ ಮತ್ತು ಎನ್‌ಜೆಪಿಸಿ ಪಿಂಚಣಿದಾರರಿಗೆ ಸಂಬಂಧಿಸಿದಂತೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

8. ಈ ಆದೇಶದ ಮೇರೆಗೆ ಲಭ್ಯವಿರುವ ತುಟ್ಟಿಭತ್ಯೆಯನ್ನು ನಗದಾಗಿ ಪಾವತಿ ಮಾಡಲಾಗುವುದು.

9. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

10. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್.ಜೋಗೋಜಿ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು–2).

ಸಂಖ್ಯೆ:ಪಬ್ಯಾಮ: 359 :2017–18 ದಿನಾಂಕ:13.10.2017

ಗೆ,
**ಅಧ್ಯಕ್ಷರು / ಮುಖ್ಯಕಾರ್ಯನಿರ್ವಹಣಾಧಿಕಾರಿಗಳು**
**ರಾಜ್ಯದ ಎಲ್ಲಾ ಪಟ್ಟಣ ಸಹಕಾರ ಬ್ಯಾಂಕುಗಳಿಗೆ,**

ತಮ್ಮ ವಿಶ್ವಾಸಿ,

(ಪುಂಡಲೀಕ ಎನ್.ಕೇರೂರ)
ಮುಖ್ಯಕಾರ್ಯನಿರ್ವಹಣಾಧಿಕಾರಿ